## ಎಂವಿಸಿ ಸಂಖ್ಯೆಃ 1792/2024 ಪಿಡಬ್ಲೂಃ01

## ದಿನಾಂಕಃ 25-06-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.

## ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

1. ಅಪಘಾತಕ್ಕೆ ಸಂಬಂಧಿಸಿದ ಪ್ರ.ವ. ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ದೂರಿನ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಸ್ಥಳ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಅದರ ಜೊತೆ ಲಗತ್ತಿಕ ಕಚ್ಚಾ ಹಾತ ನಕಾಶೆಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.
4. ವಾಹನದ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಐಎಂವಿ ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.
6. ಮಹಮ್ಮದ ಜೈದ ಇತನ ಹೇಳಿಕೆ ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.
7. ಮಹಮ್ಮದ ಅರೀಸ ಇತನ ಹೇಳಿಕೆ ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.
8. ಇಸಮಾಯಿಲ್ ಇತನ ಹೇಳಿಕೆ ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.
9. ಸೈಯದ್ ರಿಯಾಜ ಇತನ ಹೇಳಿಕೆ ನೋಡಿ ಗುರುತಿಸಿದ್ದು, ಅದನ್ನು ನಿಪಿ-9 ಎಂದು ಗುರುತಿಸಲಾಯಿತು.
10. ಅಂತಿಮ ವರದಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-10 ಎಂದು ಗುರುತಿಸಲಾಯಿತು.
11. ಆಸ್ಪತ್ರೆಯಿಂದ ಬಿಡುಗಡೆಯಾದ ಒಟ್ಟು 5 ದಾಖಲೆಗಳನ್ನು ಒಟ್ಟಾಗಿ ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-11 ಎಂದು ಗುರುತಿಸಲಾಯಿತು.
12. 5 ಆಸ್ಪತ್ರೆ ಬಿಲ್ಲುಗಳು ನೋಡಿ ಗುರುತಿಸಿದ್ದು, ಅವುಗಳನ್ನುಒಟ್ಟಾಗಿ ನಿಪಿ-12 ಎಂದು ಗುರುತಿಸಲಾಯಿತು.

13. 49 ಔಷಧಿ ಬಿಲ್ಲುಗಳನ್ನು ನೋಡಿ ಗುರುತಿಸಿದ್ದು, ಒಟ್ಟಾಗಿ ನಿಪಿ-13 ಎಂದು ಗುರುತಿಸಲಾಯಿತು.

14. 89 ಊಟ ಮತ್ತು ಟಿಫಿನ್ ಬಿಲ್ಲುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ-14 ಎಂದು ಗುರುತಿಸಲಾಯಿತು.

15. 12 ಲಾಡ್ಜ್ ಮತ್ತು ಟ್ಯಾಕ್ಸಿ ಬಿಲ್ಲುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ-15 ಎಂದು ಗುರುತಿಸಲಾಯಿತು.

16. 16 ವೈದ್ಯರು ಕೊಟ್ಟ ಸಲಹಾ ಚೀಟಿಗಳು ನೋಡಿ ಗುರುತಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ-16 ಎಂದು ಗುರುತಿಸಲಾಯಿತು.

17. ಅಂಗನ್ಯೂನ್ಯತೆ ಪ್ರಮಾಣ ಪತ್ರ ನೋಡಿ ಗುರುತಿಸಿದ್ದು, ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಕಾಲಾವಕಾಶ ಕೇಳಿದ್ದರಿಂದ ಮುಖ್ಯ ವಿಚಾರಣೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**(ಓ.ಹೇ.ಕೇ.ಸ.)**

**3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ರಾಣೆಬೆನ್ನೂರ.**

ಸಾಕ್ಷಿದಾರರ ಸಹಿಃ